ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 13/3/2020

## ಅಸಾಂವಿಧಾನಿಕ ಪದ ಬಳಕೆ; ವಾಗ್ವಾದ

13/3/20

**ವಿಧಾನ ಪರಿಷತ್ತು:** ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ವಿರುದ್ಧ ಜೆಡಿಎಸ್ ಸದಸ್ಯ ಟಿ.ಎ.ಶರವಣ ನೀಡಿದ ಹೇಳಿಕೆಯು ಮೇಲ್ಮನೆಯಲ್ಲಿ ವಾಗ್ವಾದಕ್ಕೆ ಎಡೆಮಾಡಿಕೊಟ್ಟಿತು. ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯೊಬ್ಬರು 'ಮುಸ್ಲಿಂ ಸಮುದಾಯಕ್ಕೆ ಸಂಬಂಧಿಸಿದಂತೆ ಯಾವುದೇ ಅಭಿವೃದ್ಧಿ ಕೆಲಸ ಮಾಡುವುದಿಲ್ಲ' ಎಂದು ಬಹಿರಂಗವಾಗಿ ಹೇಳಿಕೆ ನೀಡಿದ್ದಾರೆ. ಈ ಮೂಲಕ ಬಹಿರಂಗವಾಗಿ ತಾರತಮ್ಯ ಧೋರಣೆ ಅನುಸರಿಸುತ್ತಿರುವುದನ್ನು ಒಪ್ಪಿಕೊಂಡಿದ್ದಾರೆ. ಇದು ಎಷ್ಟು ಸರಿ ಎಂದು ಅಸಂವಿಧಾನಿಕ ಪದ ಬಳಸಿದರು. ಇದಕ್ಕೆ ಆಡಳಿತ ಪಕ್ಷದ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿ, ಕ್ಷಮೆಯಾಚಿಸುವಂತೆ ಪಟ್ಟುಹಿಡಿದರು. ಆಗ ಜೆಡಿಎಸ್‌ನ ಬಸವರಾಜ ಹೊರಟ್ಟಿ, 'ಈ ರೀತಿ ಅಸಂವಿಧಾನಿಕ ಪದ ಬಳಕೆ ಮಾಡಿದ್ದು ತಪ್ಪು, ಆ ಪದವನ್ನು ಹಿಂಪಡೆಯುವಂತೆ ಸೂಚಿಸುವುದಾಗಿ' ಹೇಳಿದರು. ನಂತರ ಶರವಣ, ಆ ಪದ ಹಿಂಪಡೆದರು. ಕಡತದಿಂದಲೂ ಅದನ್ನು ತೆಗೆದು ಹಾಕಲಾಯಿತು.

**ಮುಖ್ಯ ಸಚೇತಕರಾಗಿ ನಾರಾಯಣಸ್ವಾಮಿ ನೇಮಕ:** ಪ್ರತಿಪಕ್ಷದ ಮುಖ್ಯ ಸಚೇತಕರಾಗಿ ಎಂ.ನಾರಾಯಣಸ್ವಾಮಿ ಅವರನ್ನು ನೇಮಕ ಮಾಡಲಾಗಿದೆ ಎಂದು ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ಪ್ರಕಟಿಸಿದರು. ಗುರುವಾರ ಮೇಲ್ಮನೆಯಲ್ಲಿ ಸಭಾಪತಿಗಳು ಇದನ್ನು ಪ್ರಕಟಿಸಿ, ಮುಖ್ಯ ಸಚೇತಕರಿಗೆ ನಿಗದಿಪಡಿಸಿದ ಆಸನದಲ್ಲಿ ಕುಳಿತುಕೊಳ್ಳುವಂತೆ ನಾರಾಯಣಸ್ವಾಮಿ ಅವರಿಗೆ ಸೂಚಿಸಿದರು. ನಂತರ ನಾರಾಯಣಸ್ವಾಮಿ, ಈ ಅವಕಾಶ ಕಲ್ಪಿಸಿದ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ, ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ, ವಿಧಾನಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ನೂತನ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಮಾಜಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಅವರಿಗೆ ಅಭಿನಂದನೆ ಸಲ್ಲಿಸಿದರು.